ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 291 |
| ಸದಸ್ಯರ ಹೆಸರು | : | ಶ್ರೀಮತಿ ಎಸ್. ವೀಣಾ ಅಚ್ಚಯ್ಯ |
| ಉತ್ತರಿಸುವ ದಿನಾಂಕ | : | 09-12-2020 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೊಡಗು ಜಿಲ್ಲೆಯಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಎಷ್ಟು ಗಿರಿಜನ ಫಲಾನುಭವಿಗಳಿಗೆ ಭೂಮಿಯನ್ನು ಮಂಜೂರು ಮಾಡಲಾಗಿದೆ;</td><td rowspan="3">ಕೊಡಗು ಜಿಲ್ಲೆಯಲ್ಲಿ ಅರಣ್ಯ ಹಕ್ಕು ಕಾಯ್ದೆಯಡಿ ಮಂಜೂರು ಮಾಡಿದ ಅರ್ಜಿಗಳ ವಿವರಗಳು ಕೆಳಕಂಡಂತಿದೆ.<br><br>
<table>
<tr><th>ಕ್ಲೇಮುದಾರರ ವಿವರ</th><th>ಸ್ವೀಕೃತಗೊಂಡ ಅರ್ಜಿಗಳ ಸಂಖ್ಯೆ</th><th>ವಿತರಿಸಿರುವ ಹಕ್ಕು ಪತ್ರಗಳ ಸಂಖ್ಯೆ</th><th>ಮಂಜೂರು ಮಾಡಿರುವ ಭೂಮಿ ವಿವರ (ಎಕರೆಗಳಲ್ಲಿ)</th><th>ತಿರಸ್ಕೃತಗೊಂಡಿರುವ ಅರ್ಜಿಗಳ ಸಂಖ್ಯೆ</th><th>ಇತ್ಯರ್ಥವಾಗದೆ ಬಾಕಿ ಇರುವ ಅರ್ಜಿಗಳ ಸಂಖ್ಯೆ</th></tr>
<tr><td>ಪರಿಶಿಷ್ಟ ಪಂಗಡ</td><td>2825</td><td>1739</td><td>2099.41</td><td>1086</td><td>0</td></tr>
<tr><td>ಇತರೆ ಪಾರಂಪರಿಕ ಅರಣ್ಯ ವಾಸಿಗಳು</td><td>1184</td><td>0</td><td>0</td><td>1184</td><td>0</td></tr>
<tr><td>ಸಮುದಾಯ ಹಕ್ಕುಗಳು</td><td>57</td><td>45</td><td>26236.72</td><td>10</td><td>2</td></tr>
<tr><td>ಒಟ್ಟು</td><td>4066</td><td>1784</td><td>28336.13</td><td>2280</td><td>2</td></tr>
</table></td></tr>
<tr><td>ಆ)</td><td>ಜಿಲ್ಲೆಯಲ್ಲಿ ಇದುವರೆಗೂ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿಯನ್ನು ಮಂಜೂರು ಮಾಡುವಂತೆ ಕೋರಿ ಬಂದಿರುವ ಅರ್ಜಿಗಳು ಎಷ್ಟು;</td></tr>
<tr><td>ಇ)</td><td>ಸದರಿ ಅರ್ಜಿಗಳಲ್ಲಿ ಇದುವರೆಗೂ ವಿಲೇವಾರಿಯಾಗದೆ ಉಳಿದಿರುವ ಅರ್ಜಿಗಳೆಷ್ಟು;</td></tr>
<tr><td>ಈ)</td><td>ಜಿಲ್ಲೆಗಳಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿ ಹಂಚಿಕೆ ಮಾಡುವಲ್ಲಿ ಅನಗತ್ಯ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು?</td><td>ಜಿಲ್ಲೆಗಳಲ್ಲಿ ಆದಿವಾಸಿ ಅರಣ್ಯ ಹಕ್ಕು ಕಾಯ್ದೆಯಡಿ ಭೂಮಿ ಹಂಚಿಕೆ ಮಾಡುವಲ್ಲಿ ಅನಗತ್ಯ ವಿಳಂಬವಾಗುತ್ತಿರುವುದಕ್ಕೆ ಕಾರಣಗಳು ಕೆಳಕಂಡಂತಿದೆ.<br>1. ಕ್ಲೇಮುದಾರರು ಕಂದಾಯ ಭೂಮಿಗಾಗಿ ಅರ್ಜಿ ಸಲ್ಲಿಸಿರುತ್ತಾರೆ.<br>2. ಇತರೆ ಪಾರಂಪರಿಕ ಅರಣ್ಯ ವಾಸಿಗಳು 75 ವರ್ಷಗಳಿಂದ ಅರಣ್ಯ ಭೂಮಿಯನ್ನು ಅವಲಂಬಿಸಿರುವುದಕ್ಕೆ ಅಗತ್ಯ ದಾಖಲೆಗಳನ್ನು ಒದಗಿಸಲು ವಿಫಲರಾಗಿರುತ್ತಾರೆ.<br>3. ಒಂದೇ ಕುಟುಂಬದಲ್ಲಿ ಬಹುಮಂದಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ.<br>4. ಅರ್ಜಿದಾರರಲ್ಲಿ ಈಗಾಗಲೇ ಕೆಲವರು ಅರಣ್ಯ ಇಲಾಖಾ ವತಿಯಿಂದ ಪುನರ್ ವಸತಿ ಪಡೆದುಕೊಂಡಿರುತ್ತಾರೆ.</td></tr>
</table>

ಸಕಇ 379 ಎಸ್‌ಟಿಪಿ 2020

(ಬಿ.ಶ್ರೀರಾಮುಲು)
ಸಮಾಜ ಕಲ್ಯಾಣ ಸಚಿವರು